ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(263)

ಶ್ರೀ ಕೆ.ಪ್ರತಾಪ್‌ಚಂದ್ರ ಶೆಟ್ಟಿ (ಕುಂದಾಪುರ):- ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲೋಕಿನಲ್ಲಿ ಪಡಿತರ ಚೀಟಿಯ ವ್ಯವಸ್ಥೆ ಸಮರ್ಪಕವಾಗಿ ವಿತರಣೆಯಾಗದೇ ಇರುವುದರಿಂದ ಬಡವರಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ,

ಆ) ಇದನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಜಿ.ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):- ಇಲ್ಲ. ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಆಲಮಟ್ಟಿ ಯೋಜನೆಯ ಎರಡನೇ ಹಂತದಲ್ಲಿ ಬೀಳಗಿ ಕ್ಷೇತ್ರದಲ್ಲಿ ಸೇತುವೆ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 93(449)

ಶ್ರೀ ಜೆ.ಟಿ.ಪಾಟೀಲ್ (ಬೀಳಗಿ):- ಮಾನ್ಯ ಭಾರಿ ಮತ್ತು ಮಾಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಲಮಟ್ಟಿ ಯೋಜನೆಯ ಎರಡನೇ ಹಂತದಲ್ಲಿ ಬೀಳಗಿ ಮತಕ್ಷೇತ್ರದ ಜಮಖಂಡಿ ತಾಲ್ಲೂಕಿನಲ್ಲಿ ಬರುವ ಚಿಕ್ಕಪಡಸಲಗಿ ಸೇತುವೆ ಸಂಪೂರ್ಣವಾಗಿ ಮುಳುಗಡೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ, ಹೊಸ ಸೇತುವೆ ನಿರ್ಮಿಸಲು ಕೈಗೊಂಡಿರುವ ಕ್ರಮಗಳೇನು?

ಇ) ಈ ಯೋಜನೆಯನ್ನು ಸಿದ್ಧಪಡಿಸಿದರೆ ಅಂದರ ಅಂದಾಜು ವೆಚ್ಚವೆಷ್ಟು?

ಶ್ರೀ ಕೆ.ಎನ್.ನಾಗೇಗೌಡ (ಭಾರಿ ಮತ್ತು ಮಾಧ್ಯಮ ನೀರಾವರಿ ಸಚಿವರು):- ಬಂದಿದೆ. ಚಿಕ್ಕಪಡಸಲಗಿ ಸೇತುವೆಯು ಮಹಾಪೂರ ಬಂದಾಗ ಮತ್ತು ಆಲಮಟ್ಟಿ ಡ್ಯಾಮ್‌ನ ಎತ್ತರ 509.00 ಆದಾಗ ಡ್ಯಾಮಿನ ಹಿನ್ನೀರಿನಲ್ಲಿ ಮುಳುಗಡೆ ಆಗುತ್ತದೆ. ಅದಕ್ಕಾಗಿ ಒಂದು ಹೊಸ ಮೇಲ್ಮಟ್ಟದ ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಮತ್ತು ಸಂಪರ್ಕ ಸಾಧನವಾಗಿ ಒಂದು ಪರ್ಯಾಯ ವ್ಯವಸ್ಥೆ ಇರಲು ಹಾಗೂ ಮೇಲ್ಮಟ್ಟದ ಸೇತುವೆಯ ಅಪ್ರೋಚ್‌ಗಳನ್ನು ಎತ್ತರಿಸುವ ಬಗ್ಗೆ ಸರ್ವೆ ಕೆಲಸ ಮತ್ತು ಅಂದಾಜನ್ನು ಸಿದ್ಧಪಡಿಸಲು ಕ್ರಮ ಕೈಗೊಳ್ಳಲಾಗಿದೆ.

ಚಿಕ್ಕಪಡಸಲಗಿ ಬಳಿ ಹೊಸ ಮೇಲ್ಮಟ್ಟದ ಸೇತುವೆ ನಿರ್ಮಾಣದ ಅಂದಾಜು 23 ಕೋಟಿ ರೂ.ಗಳು ಆಗುವ ನಿರೀಕ್ಷೆ ಇದೆ.

ವಿಷಯ:- ಬಿಜಾಪುರ ಜಿಲ್ಲೆ ಅಂತರ್‌ಜಲ ಅಭಿವೃದ್ಧಿ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 94(450-ಎ)

ಶ್ರೀ ಜೆ.ಟಿ.ಪಾಟೀಲ (ಬೀಳಗಿ):- ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್‌ಜಲಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ ಅಂತರ್ಜಲ ಅಭಿವೃದ್ಧಿಗೆ ಸರ್ಕಾರದವರು ಕೈಗೊಂಡಿರುವ